12

# ಕರ್ನಾಟಕ ಸರ್ಕಾರ

ಸಂಖ್ಯೆ: ಸಸಂಶಾ (ಎಂ)/60/ 2019

ಕರ್ನಾಟಕ ಸರ್ಕಾರ ಸಚಿವಾಲಯ,
ವಿಧಾನಸೌಧ, ಬೆಂಗಳೂರು.
ದಿನಾಂಕ: 17.07.2019.

## ಸುತ್ತೋಲೆ

ವಿಷಯ: ಸಚಿವ ಸಂಪುಟ ಸಭೆಯ ಮುಂದೆ ಮಂಡಿಸುವ ಕರಡು ವಿಧೇಯಕಗಳು / ನಿಯಮಗಳು ಕಡ್ಡಾಯವಾಗಿ ಕನ್ನಡದಲ್ಲಿಯೇ ಇರುವ ಬಗ್ಗೆ.

ಉಲ್ಲೇಖ: ಅಧ್ಯಕ್ಷರು, ಕನ್ನಡ ಅಭಿವೃದ್ಧಿ ಪ್ರಾಧಿಕಾರ ಇವರ ಪತ್ರ ಸಂಖ್ಯೆ:ಕಅಪ್ರಾ/ಅ/1527/2019, ದಿನಾಂಕ: 03.07.2019

= = =

ಸಚಿವ ಸಂಪುಟ ಟಿಪ್ಪಣಿಗಳನ್ನು ಕನ್ನಡ ಮತ್ತು ಆಂಗ್ಲ ಭಾಷೆಯಲ್ಲಿ ಮಂಡಿಸುತ್ತಿರುವುದು ಸರಿಯಷ್ಟೆ. ಆದರೆ, ಸಚಿವ ಸಂಪುಟ ಟಿಪ್ಪಣಿಗೆ ಲಗತ್ತಿಸಿ ಸಚಿವ ಸಂಪುಟದ ಅನುಮೋದನೆ ಕೋರಿ ವಿವಿಧ ಇಲಾಖೆಗಳಿಂದ ಮಂಡಿಸುತ್ತಿರುವ ಕರಡು ವಿಧೇಯಕ/ನಿಯಮಗಳು ಹಲವು ಆಂಗ್ಲ ಭಾಷೆಯಲ್ಲಿರುವ ಬಗ್ಗೆ ಕನ್ನಡ ಅಭಿವೃದ್ಧಿ ಪ್ರಾಧಿಕಾರವು ಆಕ್ಷೇಪಣೆ ವ್ಯಕ್ತಪಡಿಸಿದೆ. **ಈ ಹಿನ್ನೆಲೆಯಲ್ಲಿ ಸಚಿವ ಸಂಪುಟದ ಅನುಮೋದನೆ ಕೋರಿ ಮಂಡಿಸಲಾಗುವ ಕರಡು ವಿಧೇಯಕಗಳು / ನಿಯಮಗಳು ಕಡ್ಡಾಯವಾಗಿ ಕನ್ನಡ ಭಾಷೆಯಲ್ಲಿರತಕ್ಕದೆಂದು ಈ ಮೂಲಕ ತಿಳಿಯಪಡಿಸಲಾಗಿದೆ.**

(signature) 17/7
(ಟಿ.ಎಂ. ವಿಜಯ್ ಭಾಸ್ಕರ್)
ಸರ್ಕಾರದ ಮುಖ್ಯ ಕಾರ್ಯದರ್ಶಿ

**ಇವರಿಗೆ:**

1. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು.
2. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು.
3. ಸರ್ಕಾರದ ಎಲ್ಲಾ ಕಾರ್ಯದರ್ಶಿಗಳು.